# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕ: 24 – 08 – 2023

## ಪ್ರಕಟಣೆ

**ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.**

* * * * * * *

2023-24ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ (ಸಂಸ್ಕೃತ ಮತ್ತು ಚಿತ್ರಕಲಾ ಕಾಲೇಜುಗಳೂ ಸೇರಿದಂತೆ) ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು (ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ಬೋಧಕರು ಒಳಗೊಂಡಂತೆ) ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಈ ಕೆಳಕಂಡಂತೆ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುದು.

### I. ತಾತ್ಕಾಲಿಕ ವೇಳಾಪಟ್ಟಿ:

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 25.08.2023 |
| 2. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 02.09.2023 |
| 3. | ರಾಜ್ಯವ್ಯಾಪಿ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ | 04.09.2023 |
| 4. | ತಾತ್ಕಾಲಿಕ ಕಾರ್ಯಭಾರ ಹಾಗೂ ಕೌನ್ಸೆಲಿಂಗ್‌ಗಾಗಿ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 08.09.2023 |
| 5. | ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕಗಳು | 11.09.2023 ರಿಂದ 15.09.2023 |
| 6. | ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 16.09.2023 |
| **ಆನ್‌ಲೈನ್ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ dce.karnataka.gov.in ಅನ್ನು ಸಂಪರ್ಕಿಸುವುದು.** | | |

### II. ಆಯ್ಕೆ ಪ್ರಕ್ರಿಯೆ:

1. ಈ ಕೆಳಕಂಡ ಮಾನದಂಡಗಳನ್ವಯ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಲಿಸ್ಟ್ (Merit List) ಅನ್ನು ತಯಾರಿಸಲಾಗುವುದು.

. . . . . . 2

| ಕ್ರ. ಸಂ. | ವಿದ್ಯಾರ್ಹತೆ | ಗರಿಷ್ಠ ಅಂಕಗಳು |
|---|---|---|
| 1 | **<u>ವಿದ್ಯಾರ್ಹತೆ:</u>** ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25%ನ್ನು ಗಣನೆಗೆ ತೆಗೆದುಕೊಳ್ಳುವುದು. *(ಉದಾ: ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ, ಅದರ ಶೇಕಡ 25ರಷ್ಟು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು).* | 25 |
| 2 | **<u>ಹೆಚ್ಚುವರಿ ವಿದ್ಯಾರ್ಹತೆ:</u>**<br>1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್‌ಇಟಿ/ಕೆ-ಸೆಟ್/ಎಸ್‌ಎಲ್‌ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | <br>12<br>09<br>06 |
| 3 | **<u>ಅನುಭವ:</u>** ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳು *(ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್ ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು, ಸೆಮೆಸ್ಟರ್ ನ 1 ತಿಂಗಳ ಸೇವಾ ಅವಧಿಗೆ 0.5 ಅಂಕ, 1 ತಿಂಗಳು ಮೇಲ್ಪಟ್ಟು 2 ತಿಂಗಳವರೆಗಿನ ಸೇವಾ ಅವಧಿಗೆ 1 ಅಂಕ ಹಾಗೂ 2 ತಿಂಗಳು ಮೇಲ್ಪಟ್ಟ ಸೇವಾ ಅವಧಿಗೆ 1.5 ಅಂಕಗಳು)* | 48 |
| | **ಒಟ್ಟು** | **100** |
| **ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡಲಾಗುವುದು.** | | |

2. ಮೇಲೆ ತಿಳಿಸಿದ ಮಾನದಂಡಗಳನ್ನು ಅನುಸರಿಸಿ, ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ವಿದ್ಯಾರ್ಹತೆ ಮತ್ತು ಸೇವಾ ವಿವರಗಳ ಆಧಾರದ ಮೇಲೆ **ರಾಜ್ಯವ್ಯಾಪಿ ಮೆರಿಟ್ ಪಟ್ಟಿ(State-wise Merit List)** ಅನ್ನು ಪ್ರಕಟಿಸಲಾಗುವುದು.

3. ರಾಜ್ಯವ್ಯಾಪಿ ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಲ್ಲಿ ವಿಷಯವಾರು ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ಅಗತ್ಯವಿರುವ ಅರ್ಹ ಅಭ್ಯರ್ಥಿಗಳ **ರಾಜ್ಯವ್ಯಾಪಿ ಆಯ್ಕೆಪಟ್ಟಿ(State-wise Selection List)** ಅನ್ನು ಪ್ರಕಟಿಸಲಾಗುವುದು ಹಾಗೂ ರಾಜ್ಯವ್ಯಾಪಿ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

4. ಆಯ್ಕೆಯಾಗುವ ಅತಿಥಿ ಉಪನ್ಯಾಸಕರಿಗೆ ಈ ಕೆಳಗಿನಂತೆ ನಿಗಧಿಪಡಿಸಿರುವ ಗೌರವಧನವನ್ನು ನಿಯಮಾನುಸಾರ ನಿರ್ವಹಿಸುವ ಕಾರ್ಯಭಾರಕ್ಕೆ ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿರುವ ಅರ್ಹತೆಗೆ (ವಿದ್ಯಾರ್ಹತೆ/ಸೇವಾ ಅವಧಿ) ಅನುಗುಣವಾಗಿ ಪರಿಗಣಿಸಲಾಗುವುದು.

   ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

   ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

   ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

......3

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

5. ಆಯ್ಕೆಯಾಗುವ ಅತಿಥಿ ಉಪನ್ಯಾಸಕರಿಗೆ ಕಲಾ/ವಾಣಿಜ್ಯ/ಭಾಷಾ ವಿಷಯಗಳಿಗೆ ಗರಿಷ್ಠ 15 ಗಂಟೆಗಳ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿರುವ ವಿಷಯಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ಮಾತ್ರ ಹಂಚಿಕೆ ಮಾಡಲಾಗುವುದು ಹಾಗೂ 15/19 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದಲ್ಲಿ ಎಷ್ಟು ಗಂಟೆಗಳ ಕಾರ್ಯಭಾರ ಲಭ್ಯವಿದೆಯೋ ಅದಕ್ಕೆ ಅನುಗುಣವಾಗಿ ಗೌರವಧನವನ್ನು ಪರಿಗಣಿಸಲಾಗುವುದು.

6. ಮುಂದುವರೆದು, ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ಗ್ರಂಥಪಾಲಕರ ಹುದ್ದೆಗಳು ಖಾಲಿ ಇರುವ ಕಾಲೇಜುಗಳಲ್ಲಿ ಅತಿಥಿ ದೈಹಿಕ ಶಿಕ್ಷಣ ಹಾಗೂ ಅತಿಥಿ ಗ್ರಂಥಪಾಲಕರ ಸೇವೆಯನ್ನು ಬಳಸಿಕೊಳ್ಳಲು ಉದ್ದೇಶಿಸಲಾಗಿದ್ದು, ಅವರಿಗೆ 19 ಗಂಟೆಗಳ ಕಾರ್ಯಭಾರವನ್ನು ನಿಗಧಿಗೊಳಿಸಿ ಆಯ್ಕೆ ಮಾಡಲಾಗುತ್ತದೆ.

7. ಅಭ್ಯರ್ಥಿಗಳು ಸೇವಾ ಅವಧಿಯ ವಿವರಗಳನ್ನು ಪ್ರಾಂಶುಪಾಲರಿಂದ ಈ ಪತ್ರಕ್ಕೆ ಲಗತ್ತಿಸಿರುವ ನಿಗಧಿತ ನಮೂನೆಯಲ್ಲಿ ಪಡೆದು ಸದರಿ ಸೇವಾ ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ಯಥಾವತ್ತಗಿ ನಮೂದಿಸುವುದು.

8. ಮುಂದುವರೆದು, ಸದರಿ ನಮೂನೆಯಲ್ಲಿ ಈಗಾಗಲೇ ಈ ಹಿಂದಿನ ವರ್ಷಗಳ ಸೇವಾ ವಿವರಗಳನ್ನು ಪ್ರಾಂಶುಪಾಲರಿಂದ ಪಡೆದಿದ್ದಲ್ಲಿ, ಪ್ರಸಕ್ತ ಸಾಲಿನ ಅಂದರೆ 2022-23ನೇ ಸಾಲಿನ ಸೇವಾ ವಿವರಗಳನ್ನು ಮಾತ್ರ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ಪಡೆದು, ಒಟ್ಟು ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸುವುದು.

9. ಕರ್ನಾಟಕ ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ/ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಸೇವೆಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು.

10. ಕೌನ್ಸಿಲಿಂಗ್ ಮೂಲಕ ಕಾಲೇಜು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆಯಾದ ನಂತರ 02 ದಿನಗಳೊಳಾಗಿ ಸಂಬಂಧಪಟ್ಟ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

11. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಸಲ್ಲಿಸಿರುವ ವಿವರಗಳಂತೆ, ಅವರ ವಿದ್ಯಾರ್ಹತೆ ಮತ್ತು ಸೇವಾ ವಿವರದ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸುವುದು ಕಡ್ಡಾಯವಾಗಿರುತ್ತದೆ.

12. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ವಿದ್ಯಾರ್ಹತೆ, ಸೇವಾ ವಿವರಗಳು ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ನಮೂದಿಸುವಾಗ ತಪ್ಪಾಗದಂತೆ ಗಮನಹರಿಸಿ ಸರಿಯಾದ/ನಿಖರ ಮಾಹಿತಿಯನ್ನು ದಾಖಲಿಸುವುದು.

13. ಆದಾಗ್ಯೂ, ಕಣ್‌ತಪ್ಪಿನಿಂದಾಗಿ ತಪ್ಪಾದ ಮಾಹಿತಿಯನ್ನು ನಮೂದಿಸಿರುವುದು ಕಂಡುಬಂದಲ್ಲಿ ಕೂಡಲೇ ಗಮನಹರಿಸಿ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಸರಿಪಡಿಸಿಕೊಳ್ಳಲು (edit) ಸಹ ಅವಕಾಶವಿರುತ್ತದೆ. ಒಂದು ವೇಳೆ ಕೊನೆಯ ದಿನಾಂಕದ ನಂತರ ಮಾಹಿತಿಯನ್ನು ಸರಿಪಡಿಸಿಕೊಳ್ಳಲು ಮನವಿ/ಕೋರಿಕೆ ಸಲ್ಲಿಸಿದಲ್ಲಿ ಅಂತಹ ಯಾವುದೇ ಕೋರಿಕೆ/ಮನವಿಗಳನ್ನು ಪರಿಗಣಿಸುವುದಿಲ್ಲ ಎಂಬುದನ್ನು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

......4

14. ಅಭ್ಯರ್ಥಿಗಳು ಒಂದು ವೇಳೆ ವಿದ್ಯಾರ್ಹತೆ, ಸೇವಾ ವಿವರಗಳು ಹಾಗೂ ಇನ್ನಿತರೆ ಮಾಹಿತಿಗಳನ್ನು ತಪ್ಪಾಗಿ ನಮೂದಿಸಿದ್ದಲ್ಲಿ, ಮುಂದಿನ ಪರಿಣಾಮಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ ಹಾಗೂ ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಿ, ಅವರುಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು.

15. 2023-24ನೇ ಶೈಕ್ಷಣಿಕ ಸಾಲಿನಲ್ಲಿ ಆಯ್ಕೆಯಾಗುವ / ಕರ್ತವ್ಯ ನಿರ್ವಹಿಸುವ ಅತಿಥಿ ಉಪನ್ಯಾಸಕರನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯಂತೆ 2023-24ನೇ ಶೈಕ್ಷಣಿಕ ಸಾಲಿನ ಮುಕ್ತಾಯದವರೆಗೆ (ಬೋಧನಾ ಕಾರ್ಯಭಾರದ ಲಭ್ಯತೆಗನುಸಾರವಾಗಿ) ಅಥವಾ 10 ತಿಂಗಳಿಗೆ ಮಾತ್ರ, ಇದರಲ್ಲಿ ಯಾವುದೂ ಮೊದಲು ಅಲ್ಲಿಯವರೆಗೆ ಮುಂದುವರೆಸಿ, ನಂತರ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು.

16. ಕೌನ್ಸಿಲಿಂಗ್ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಆಯಾ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಅವರ ಬದಲಿಗೆ ನಂತರದ ಅಭ್ಯರ್ಥಿಯನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿ ಆಯ್ಕೆಪಟ್ಟಿಯನ್ನು ಸಂಬಂಧಪಟ್ಟ ಕಾಲೇಜಿಗೆ ರವಾನಿಸಲಾಗುವುದು.

**17. ನಿಗಧಿತ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸದ ಅಥವಾ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಕಾಲೇಜು ಆಯ್ಕೆ ಮಾಡಿಕೊಳ್ಳದ ಹಾಗೂ ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳಿಗೆ ಪುನಃ 2ನೇ ಬಾರಿಗೆ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ.**

18. ಆನ್‌ಲೈನ್ ಮೂಲಕ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುತ್ತಿರುವ ಕುರಿತು ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದರೊಂದಿಗೆ, ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾಹಿತಿಯನ್ನು ನೀಡುವುದು.

19. ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಅಂತರ್ಜಾಲ ತಾಣವನ್ನು ಪ್ರತಿನಿತ್ಯ ಗಮನಿಸಲು ತಿಳಿಸಲಾಗಿದೆ.

24/8/2023

**ಆಯುಕ್ತರು**
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**<u>ಇವರಿಗೆ,</u>**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ.

**ನಮೂನೆ**

# ಸೇವಾ ಪ್ರಮಾಣ ಪತ್ರ

ಕಾಲೇಜಿನ ಹೆಸರು:________________________________

ಅತಿಥಿ ಉಪನ್ಯಾಸಕರ ಹೆಸರು:________________________

| Academic Year | ODD Semester | | EVEN Semester | |
|---|---|---|---|---|
| | Number of Months worked | Number of Days worked | Number of Months worked | Number of Days worked |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |

- ಮೇಲ್ಕಂಡ ಅತಿಥಿ ಉಪನ್ಯಾಸಕರು ಸ್ನಾತಕೋತ್ತರ ತರಗತಿಗಳನ್ನು ಬೋಧಿಸಿರುವರೇ? (ಹೌದು/ಇಲ್ಲ); ______

- ವಿ.ಸೂ: 1. ಅತಿಥಿ ಉಪನ್ಯಾಸಕರು **ಕರ್ತವ್ಯ ನಿರ್ವಹಿಸಿದ ವರ್ಷಗಳಿಗೆ** ಮಾತ್ರ ಸೇವಾ ವಿವರಗಳನ್ನು ನಮೂದಿಸುವುದು.

  2. ಅತಿಥಿ ಉಪನ್ಯಾಸಕರ ಸೇವೆಯನ್ನು **ತಿಂಗಳು** ಮತ್ತು **ದಿನಗಳಲ್ಲಿ** (Months and Days) ಮಾತ್ರ ನಮೂದಿಸುವುದು ಹಾಗೂ **ದಿನಾಂಕಗಳಲ್ಲಿ ನಮೂದಿಸಬಾರದು.**

  3. Annual System of Years (Non-semester) ಗೆ ಸಂಬಂಧಿಸಿದ ಸೇವಾ ವಿವರಗಳನ್ನು ODD Semester ಕಲಂಗಳ ಅಡಿಯಲ್ಲಿ **ತಿಂಗಳು** ಮತ್ತು **ದಿನಗಳಲ್ಲಿ ನಮೂದಿಸುವುದು.**

**ಪ್ರಾಂಶುಪಾಲರ ಸಹಿ, ಮೊಹರಿನೊಂದಿಗೆ**